**Fax:** 08282-256262
**E-mail:**kuvempuacademic@gmail.com

Phone No - 08282-256149
**Website:** www.kuvempu.ac.in

# ಕುವೆಂಪು ವಿಶ್ವವಿದ್ಯಾಲಯ

ಶೈಕ್ಷಣಿಕ ವಿಭಾಗ, ವಿಶ್ವವಿದ್ಯಾಲಯ ಕಾರ್ಯಾಲಯ, ಕುವೆಂಪು ಶತಮಾನೋತ್ಸವ ಭವನ,
ಜ್ಞಾನ ಸಹ್ಯಾದ್ರಿ, ಶಂಕರಘಟ್ಟ – 577 451, ಶಿವಮೊಗ್ಗ ಜಿಲ್ಲೆ.

**ಸಂಖ್ಯೆ:ಕುವಿ:ಶೈವಿ:ಎಸಿ–4:123ಸಿ: 791 :2025–26** **ದಿನಾಂಕ:31–05–2025.**

## ಸುತ್ತೋಲೆ

**ವಿಷಯ: 2024–25ನೇ ಶೈಕ್ಷಣಿಕ ಸಾಲಿನಲ್ಲಿ ಪ್ರವೇಶ ಪಡೆದ ಪ್ರಥಮ/ದ್ವಿತೀಯ ವರ್ಷದ ಸ್ನಾತಕೋತ್ತರ ಪದವಿಗಳ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳ ಪ್ರವೇಶ ಶುಲ್ಕ ಪಾವತಿಸಿದ ಬಗ್ಗೆ.**

ಉಲ್ಲೇಖ: 1. ಸರ್ಕಾರದ ಆದೇಶ ಸಂಖ್ಯೆ:SWD/EDU/ED3/91/2023(COM-1098854), ದಿನಾಂಕ:03–07–2023.
2. ವಿ.ವಿ. ಸುತ್ತೋಲೆ ಸಂಖ್ಯೆ:ಕುವಿ:ಶೈವಿ:ಎಸಿ–8/461/2024–25, ದಿನಾಂಕ:21–05–2024.

*****

ಉಲ್ಲೇಖಿತ(1)ರ ಸರ್ಕಾರದ ಆದೇಶದನ್ವಯ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಆದೇಶದನ್ವಯ, 2024–25ನೇ ಶೈಕ್ಷಣಿಕ ಸಾಲಿನಲ್ಲಿ ಪ್ರವೇಶ ಪಡೆದ ಪ್ರಥಮ/ದ್ವಿತೀಯ ವರ್ಷದ ಸ್ನಾತಕೋತ್ತರ ಪದವಿಗಳ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ **ಆಯಾ ಸಾಲಿನ ಶುಲ್ಕ ಮರುಭರಿಕೆಗೆ ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶ(SSP)ದಲ್ಲಿ ಅರ್ಜಿಯನ್ನು ಸಲ್ಲಿಸಿ, ನಂತರ ಸಂಬಂಧಪಟ್ಟ ಇಲಾಖೆಯಿಂದ ಮಂಜೂರಾಗುವ ಶುಲ್ಕ ಮರುಭರಿಕೆಯ ಮೊತ್ತವನ್ನು 07 ದಿನಗಳೊಳಗಾಗಿ ಸಂಬಂಧಪಟ್ಟ ಕಾಲೇಜುಗಳಿಗೆ/ವಿಭಾಗಗಳಿಗೆ ಮರುಪಾವತಿ ಮಾಡುವಂತೆ ಕಟ್ಟುನಿಟ್ಟಾಗಿ ಆದೇಶಿಸಲಾಗಿತ್ತು.**

ಮುಂದುವರೆದಂತೆ, ಪಾವತಿಸಿದ ಪ್ರವೇಶ ಶುಲ್ಕದ ಮಾಹಿತಿಯನ್ನು ನಿಗದಿತ ನಮೂನೆಯಲ್ಲಿ ಭರ್ತಿಮಾಡಿ ಶೈಕ್ಷಣಿಕ ವಿಭಾಗಕ್ಕೆ ಸಲ್ಲಿಸುವಂತೆ ಸಂಬಂಧಪಟ್ಟ ವಿಭಾಗಗಳ ಅಧ್ಯಕ್ಷರುಗಳಿಗೆ / ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಈ ಮೂಲಕ ಉಲ್ಲೇಖಿತ(2)ರ ಸುತ್ತೋಲೆಯಲ್ಲಿ ತಿಳಿಸಲಾಗಿತ್ತು. ಆದರೂ ಇದುವರೆವಿಗೂ ವಿದ್ಯಾರ್ಥಿಗಳಿಂದ ಶುಲ್ಕ ಪಾವತಿಸಿರುವ ಬಗ್ಗೆ ಯಾವುದೇ ಮಾಹಿತಿ ಒದಗಿಸಿರುವುದಿಲ್ಲ. ಈ ಕುರಿತು ತುರ್ತಾಗಿ **03 ದಿನಗಳೊಳಗಾಗಿ** ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು **ವಿದ್ಯಾರ್ಥಿ ವೇತನದ** ಶುಲ್ಕ ಮರುಭರಿಕೆಯಿಂದ ಪಾವತಿಸಿದ ಪ್ರವೇಶ ಶುಲ್ಕದ ಮಾಹಿತಿಯನ್ನು ಕೆಳಕಂಡ ನಮೂನೆಯಲ್ಲಿ ಭರ್ತಿಮಾಡಿ ಶೈಕ್ಷಣಿಕ ವಿಭಾಗಕ್ಕೆ ಸಲ್ಲಿಸುವಂತೆ ತಿಳಿಸಲಾಗಿದೆ.

| Sl.No. | Dept./College Name | Name of the Students | Category | Course | Paid Ac/No. | Challen No. | Paid Date | Total Amount | Remarks |
|---|---|---|---|---|---|---|---|---|---|
| | | | | | | | | | |

ಕುಲಸಚಿವರು
ಕುವೆಂಪು ವಿಶ್ವವಿದ್ಯಾನಿಲಯ
ಜ್ಞಾನ ಸಹ್ಯಾದ್ರಿ
ಶಂಕರಘಟ್ಟ–577 451.

ಗೆ,

1. ಎಲ್ಲಾ ಸ್ನಾತಕೋತ್ತರ ವಿಭಾಗದ ಅಧ್ಯಕ್ಷರು / ಸಂಯೋಜನಾಧಿಕಾರಿಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ– ಮುಂದಿನ ಅಗತ್ಯ ಸೂಕ್ತಕ್ರಮಕ್ಕಾಗಿ.
2. ನಿರ್ದೇಶಕರು, ಸ್ನಾತಕೋತ್ತರ ಕೇಂದ್ರ, ಕಡೂರು/ ಚಿಕ್ಕಮಗಳೂರು– ಮುಂದಿನ ಅಗತ್ಯ ಸೂಕ್ತಕ್ರಮಕ್ಕಾಗಿ.
3. ವಿಶ್ವವಿದ್ಯಾಲಯದ ವ್ಯಾಪ್ತಿಗೊಳಪಡುವ ಶಿವಮೊಗ್ಗ/ಚಿಕ್ಕಮಗಳೂರು ಜಿಲ್ಲೆಯ ಸ್ನಾತಕೋತ್ತರ ಪದವಿಗಳ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಮುಂದಿನ ಅಗತ್ಯ ಸೂಕ್ತಕ್ರಮಕ್ಕಾಗಿ.
4. ಪ್ರಾಂಶುಪಾಲರು, ಸಹ್ಯಾದ್ರಿ ಕಲಾ/ವಾಣಿಜ್ಯ ಮತ್ತು ನಿರ್ವಹಣಾ/ವಿಜ್ಞಾನ ಕಾಲೇಜು, ಶಿವಮೊಗ್ಗ – ಮುಂದಿನ ಅಗತ್ಯ ಸೂಕ್ತಕ್ರಮಕ್ಕಾಗಿ.
5. ಪ್ರಾಂಶುಪಾಲರು, ವಿಶ್ವವಿದ್ಯಾಲಯ ಶ್ರೀಮದ್ ರಂಭಾಪುರಿ ಕಲಾ ಮತ್ತು ವಾಣಿಜ್ಯ ಕಾಲೇಜು, ಶಂಕರಘಟ್ಟ– ಮುಂದಿನ ಅಗತ್ಯ ಸೂಕ್ತಕ್ರಮಕ್ಕಾಗಿ.
6. ವಿಶ್ವವಿದ್ಯಾಲಯದ ಎಲ್ಲಾ ಸಂಯೋಜಿತ ಸ್ನಾತಕ ಕಾಲೇಜುಗಳ ಪ್ರಾಂಶುಪಾಲರುಗಳು – ಶಿವಮೊಗ್ಗ ಮತ್ತು ಚಿಕ್ಕಮಗಳೂರು ಜಿಲ್ಲೆ. – ಮುಂದಿನ ಅಗತ್ಯ ಸೂಕ್ತಕ್ರಮಕ್ಕಾಗಿ.
7. ಪ್ರೊ. ಎಂ.ಆರ್. ಸತ್ಯಪ್ರಕಾಶ್, ನೋಡಲ್ ಅಧಿಕಾರಿಗಳು, UUCMS, ಸ್ನಾತಕೋತ್ತರ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ಅಧ್ಯಯನ ವಿಭಾಗ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.

ಪ್ರತಿಗಳು:

1. ಆಪ್ತ ಸಹಾಯಕರು, ಕುಲಪತಿಗಳು: ಕುಲಸಚಿವರು: ಕುಲಸಚಿವರು(ಪರೀಕ್ಷಾಂಗ) ಹಣಕಾಸು ಅಧಿಕಾರಿಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
2. ಕಛೇರಿ ಪ್ರತಿ.